# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1140** |
| ಉತ್ತರಿಸಬೇಕಾದ ದಿನಾಂಕ | : | 18.12.2024 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇರುವ ವಸತಿ ರಹಿತ ಫಲಾನುಭವಿಗಳಿಗೆ ಇರುವ ವಸತಿ ಯೋಜನೆಗಳು ಯಾವುವು; (ಮಾಹಿತಿ ನೀಡುವುದು) ಈ ಯೋಜನೆಗಳಲ್ಲಿ 2024-25ನೇ ಸಾಲಿಗೆ ನಿಗದಿಪಡಿಸಿರುವ ಮನೆಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ವಸತಿರಹಿತರಿಗಾಗಿ ವಸತಿ ಸೌಕರ್ಯವನ್ನು ಕಲ್ಪಿಸಲು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>**ರಾಜ್ಯ ಪುರಸ್ಕೃತ ವಸತಿ ಯೋಜನೆಗಳು:**<br><br>1. ಬಸವ ವಸತಿ ಯೋಜನೆ<br>2. ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾಮೀಣ & ನಗರ)<br>3. ದೇವರಾಜು ಅರಸು ವಸತಿ ಯೋಜನೆ(ಗ್ರಾಮೀಣ & ನಗರ)<br>4. ವಾಜಪೇಯಿ ನಗರ ವಸತಿ ಯೋಜನೆ<br>5. ಮುಖ್ಯಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ ಯೋಜನೆ (ಬೆಂಗಳೂರು ನಗರದಲ್ಲಿ ಮಾತ್ರ)<br><br>**ಕೇಂದ್ರ ಪುರಸ್ಕೃತ ವಸತಿ ಯೋಜನೆಗಳು:**<br><br>1. ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾಮೀಣ)<br>2. ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ)<br><br>ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಧಾನಮಂತ್ರಿ ಆವಾಸ್ ಯೋಜನೆ(ಗ್ರಾಮೀಣ)ಯಡಿ 2024-25ನೇ ಸಾಲಿಗೆ 2,26,175 ಮನೆಗಳ ಗುರಿಯನ್ನು ನಿಗಧಿಪಡಿಸಲಾಗಿದೆ. ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಆ) | ಈ ಪೈಕಿ ಪ್ರವರ್ಗ ಒಂದರ ಅಡಿಯಲ್ಲಿ ಬರುವ ಅಲೆಮಾರಿ ಮತ್ತು ಅರೆ ಅಲೆಮಾರಿ ಜಾತಿಯವರಿಗೆ ನಿಗದಿಪಡಿಸಿರುವ ಮನೆಗಳು ಎಷ್ಟು; ಮಂಜೂರು ಮಾಡಿರುವ ಮನೆಗಳು ಎಷ್ಟು; (ವಿಧಾನಸಭಾ ಕ್ಷೇತ್ರವಾರು ನೀಡುವುದು) | ದೇವರಾಜ ಅರಸು ವಸತಿ ಯೋಜನೆಯಡಿಯಲ್ಲಿ ಪ್ರವರ್ಗ-1ರ ಅಲೆಮಾರಿ ಮತ್ತು ಅರೆ ಅಲೆಮಾರಿ ಫಲಾನುಭವಿಗಳಿಗೆ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದ್ದು, 2024-25ನೇ ಸಾಲಿನಲ್ಲಿ ಸರ್ಕಾರದಿಂದ ಯಾವುದೇ ಗುರಿ ನಿಗಧಿಪಡಿಸಿರುವುದಿಲ್ಲ. |
| ಇ) | ಹಿಂದುಳಿದ ಅಲೆಮಾರಿ ಮತ್ತು ಅರೆ ಅಲೆಮಾರಿ ಜಾತಿಗಳಿಗೆ ನಿಗದಿಪಡಿಸಿರುವ ಮನೆಗಳು ಎಷ್ಟು; ಮಂಜೂರಾದ ಮನೆಗಳು ಎಷ್ಟು; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು) | |
| ಈ) | ವಸತಿ ಯೋಜನೆಡಿ ಹಾಲಿ ಇರುವ ಸಹಾಯಧನದ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಎಷ್ಟು ಮೊತ್ತವನ್ನು ನಿಗದಿಪಡಿಸಲಾಗುವುದು ಇಲ್ಲದಿದ್ದಲ್ಲಿ ಈ ಮೊತ್ತವನ್ನು ಹೆಚ್ಚಿಸಲು ಸರ್ಕಾರಕ್ಕೆ ಇರುವ ಅಡಚಣೆಗಳೇನು; | ರಾಜ್ಯದ ವಿವಿಧ ವಸತಿ ಯೋಜನೆಯಡಿ ನೀಡಲಾಗುತ್ತಿರುವ ಸಹಾಯಧನ ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| ಊ) | ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜಾತಿಯವರಿಗೆ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ. ಹಾಗೂ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ? (ವಿವರ ಒದಗಿಸುವುದು) | 2024-25ನೇ ಸಾಲಿಗೆ ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲೆಮಾರಿ ಮತ್ತು ಅರ ಅಲೆಮಾರಿ ಜಾತಿಯವರಿಗೆ ಯಾವುದೇ ಮನೆಗಳನ್ನು ಮಂಜೂರು ಮಾಡಿರುವುದಿಲ್ಲ. |

ಸಂಖ್ಯೆ: ವಇ 381 ಹೆಚ್‌ಎಎಂ 2024

(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು